RNU AIR DHARWAD

MARCH 18, 2026

AKASHAVANI - DHARWAD

PRADESH SAAMACHARA (KANNADA) 12 PM

ಇಂದು ಯುಗಾದಿ ಅಮಾವಾಸ್ಯೆ. ನಾಳೆ ಚೈತ್ರ ಮಾಸದ ಶುಕ್ಲ ಪಕ್ಷದ ಪಾಡ್ಯಮಿಯಂದು ಯುಗಾದಿ ಹಬ್ಬವನ್ನು ಸಂಭ್ರಮ ಸಡಗರದಿಂದ ನಾಡಿನಾದ್ಯಂತ ಆಚರಿಸಲಾಗುತ್ತಿದೆ. ಬೇವು–ಬೆಲ್ಲ, ಜೀವನದ ಸುಖ–ದುಃಖಗಳನ್ನು ಸಮಾನವಾಗಿ ಸ್ವೀಕರಿಸುವ ಸಂಕೇತವಾಗಿ ಸೇವಿಸಲಾಗುತ್ತದೆ. ಯುಗಾದಿ ಹಬ್ಬದ ಪ್ರಯುಕ್ತ, ಕೋಲಾರ ಜಿಲ್ಲೆ, ಹಾಲು ಉತ್ಪಾದಕರಿಗೆ, ಪ್ರತಿ ಲೀಟರ್ ಹಾಲಿಗೆ, ಇಂದಿನಿಂದ 2 ರೂಪಾಯಿ ಹೆಚ್ಚಿಸಲು, ಕೋಮುಲ್ ಆಡಳಿತ ಮಂಡಳಿ ತೀರ್ಮಾನಿಸಿದೆ ಎಂದು ಕೋಮುಲ್ ಅಧ್ಯಕ್ಷ ಹಾಗೂ ಶಾಸಕ ಕೆ.ವೈ.ನಂಜೇಗೌಡ ಕೋಲಾರದಲ್ಲಿ ತಿಳಿಸಿದ್ದಾರೆ.

<><><>

ಕೇಂದ್ರ, ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ವಿಶೇಷಚೇತನರ ಸಬಲೀಕರಣ ಯೋಜನೆಯಡಿ, 37 ಜನ ವಿಶೇಷಚೇತನರಿಗೆ, ಬ್ಯಾಟರಿ ಚಾಲಿತ ಸೈಕಲ್‌ಗಳನ್ನು ಹಾಗೂ ಇತರ ಸಾಧನಗಳನ್ನು ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಮಹಾಪೌರರಾದ ಜ್ಯೋತಿ ಪಾಟೀಲ ಹಾಗೂ ಉಪ ಮಹಾಪೌರರಾದ ಸಂತೋಷ ಚವ್ಹಾಣ, ನೀಡಿದರು. ಕೇಂದ್ರ ಸಚಿವ ಪ್ರಲ್ಹಾದ ಜೋಶಿಯವರ ಹುಬ್ಬಳ್ಳಿಯ ಗೃಹ ಕಚೇರಿಯಲ್ಲಿ ಆಯೋಜಿತ ಕಾರ್ಯಕ್ರಮದಲ್ಲಿ ತ್ರಿಚಕ್ರ ವಾಹನ ಪಡೆದುಕೊಂಡ ಬೆಳಗಾವಿ ಜಿಲ್ಲೆ ರಾಮದುರ್ಗ ತಾಲೂಕಿನ, ಉಮೇಶ ಬಳಿಗಾರ, ತಮ್ಮ ದೈನಂದಿನ ಕೆಲಸಗಳಿಗೆ ತುಂಬ ಸಹಕಾರಿಯಾಗಲಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಧ್ವನಿ: ಉಮೇಶ ಬಳಿಗಾರ (20 ಸೆಕೆಂದುಗಳು)

<><><>

ಪ್ರಧಾನಮಂತ್ರಿಯವರ ಹೊಸ 15 ಅಂಶಗಳ ಕಾರ್ಯಕ್ರಮದಡಿ ಅಲ್ಪಸಂಖ್ಯಾತರಿಗೆ ಮೀಸಲಿರುವ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಕೇವಲ ವರದಿಗಳಲ್ಲೇ ಪ್ರಗತಿ ತೋರುವುದಕ್ಕಿಂತ ನೆಲಮಟ್ಟದಲ್ಲಿ ಸ್ಪಷ್ಟ ಫಲಿತಾಂಶ ಕಾಣುವಂತೆ ಇಲಾಖೆಗಳ ಅಧಿಕಾರಿಗಳು, ಕರ್ತವ್ಯ ನಿರ್ವಹಿಸುವಂತೆ ಕೊಪ್ಪಳ ಜಿಲ್ಲಾಧಿಕಾರಿ ಸುರೇಶ ಇಟ್ನಾಳ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ನಿಗದಿತ ಗುರಿಯಂತೆ ಪ್ರಗತಿ ಸಾಧಿಸುವಲ್ಲಿ ವಿಳಂಬವಾಗಿರುವ ಯೋಜನೆಗಳನ್ನು ಆದ್ಯತೆ ಮೇರೆಗೆ ತ್ವರಿತವಾಗಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

<><><>

ಹುಬ್ಬಳ್ಳಿ ವಿಭಾಗ ಮತ್ತು ಪ್ರಧಾನ ಕಚೇರಿಯ ಸಿಬ್ಬಂದಿಯನ್ನು ಒಳಗೊಂಡ ಒಟ್ಟು 12 ಇಲಾಖಾ ಆಯ್ಕೆ ಪರೀಕ್ಷೆಗಳನ್ನು ಮಾರ್ಚ್ 17 ಮತ್ತು 18 ರಂದು ಹುಬ್ಬಳ್ಳಿಯ ಆರ್.ಆರ್.ಸಿ ಯಲ್ಲಿ ನಡೆಸಲು ಯೋಜಿಸಲಾಗಿತ್ತು. ಆದರೆ, ಕನ್ನಡ ರಕ್ಷಣಾ ವೇದಿಕೆ ಸದಸ್ಯರು ಹುಬ್ಬಳ್ಳಿಯ ರೈಲ್ವೆ ನೇಮಕಾತಿ ಕೋಶ ಕಚೇರಿಯ ಪ್ರವೇಶ ದ್ವಾರದಲ್ಲಿ ಪ್ರತಿಭಟನೆ ನಡೆಸಿ, ಅಭ್ಯರ್ಥಿಗಳು ಹಾಗೂ ಪರೀಕ್ಷಾ ಸಿಬ್ಬಂದಿ ಪ್ರವೇಶಿಸಲು ಅಡ್ಡಿಪಡಿಸಿ, ಇಲಾಖಾ ಬಡ್ತಿ ಪರೀಕ್ಷೆಗಳನ್ನು ಕನ್ನಡ ಭಾಷೆಯಲ್ಲಿಯೂ ನಡೆಸಬೇಕು ಎಂದು ಆಗ್ರಹಿಸಿದರು. ಇಲಾಖಾ ಪರೀಕ್ಷೆಗಳಲ್ಲಿ ಕನ್ನಡ ಭಾಷೆಯನ್ನು ಸೇರಿಸುವ ವಿಷಯವನ್ನು ಸೂಕ್ತ ಮಟ್ಟದಲ್ಲಿ ಚರ್ಚೆಗೆ ತೆಗೆದುಕೊಳ್ಳಲಾಗುವುದು ಮತ್ತು ಅದರ ಕುರಿತು ಅಂತಿಮ ನಿರ್ಧಾರವನ್ನು ಬಳಿಕ ಕೈಗೊಳ್ಳಲಾಗುವುದು. ಹುಬ್ಬಳ್ಳಿ ವಿಭಾಗ ಮತ್ತು ಪ್ರಧಾನ ಕಚೇರಿಯ ಸಿಬ್ಬಂದಿಯ ನಿಗದಿಯಾಗಿದ್ದ ಕಂಪ್ಯೂಟರ್ ಆಧಾರಿತ ಪರೀಕ್ಷೆಗಳನ್ನು ಮುಂದೂಡಲಾಗಿದೆ. ಮುಂದೂಡಲ್ಪಟ್ಟ ಪರೀಕ್ಷೆಗಳ ಹೊಸ ದಿನಾಂಕಗಳನ್ನು ನಂತರ ತಿಳಿಸಲಾಗುವುದು ಎಂದು ಹುಬ್ಬಳ್ಳಿಯ ನೈಋತ್ಯ ರೈಲ್ವೆ ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಡಾಕ್ಟರ್ ಮಂಜುನಾಥ್ ಕನಮಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><>

ಸಾಮಾನ್ಯವಾಗಿ ಮಹಿಳೆಯರಲ್ಲಿ ಕಂಡುಬರುವ ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟುವ ಉದ್ದೇಶದಿಂದ 14 ವರ್ಷ ತುಂಬಿದ ಹಾಗೂ 15 ವರ್ಷ ವಯಸ್ಸಿನೊಳಗಿನ ಹೆಣ್ಣು ಮಕ್ಕಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿ ಅನುಸಾರ ಎಚ್.ಪಿ.ವಿ ಲಸಿಕಾ ಅಭಿಯಾನಕ್ಕೆ ಹಾವೇರಿ ಜಿಲ್ಲೆಯಲ್ಲಿ ಈಗಾಗಲೇ ಚಾಲನೆ ನೀಡಲಾಗಿದೆ. ಗರ್ಭಕಂಠ ಕ್ಯಾನ್ಸರ್ ತಡೆಗಟ್ಟುವ ಎಚ್‌ಪಿವಿ ಲಸಿಕೆಯನ್ನು ನೀಡಲು ಜಿಲ್ಲೆಯ 16 ಸಾವಿರದ 954 ಹೆಣ್ಣು ಮಕ್ಕಳನ್ನು ಗುರುತಿಸಲಾಗಿದ್ದು, ಮೊದಲ ಹಂತದಲ್ಲಿ ಜಿಲ್ಲೆಗೆ 6 ಸಾವಿರದ 245 ಲಸಿಕೆಗಳು ಸರಬರಾಜು ಆಗಿವೆ ಎಂದು ಜಿಲ್ಲಾ ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಅಧಿಕಾರಿ ಡಾಕ್ಟರ್ ಜಯಾನಂದ ಮಾಹಿತಿ ನೀಡಿದ್ದಾರೆ. ಜಿಲ್ಲೆಯ ಆಯ್ದ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು, ಜಿಲ್ಲಾಸ್ಪತ್ರೆ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಉಚಿತವಾಗಿ ಲಸಿಕೆಯನ್ನು ನೀಡಲಾಗುತ್ತಿದೆ. ಗರ್ಭಕಂಠ ಕ್ಯಾನ್ಸರ್ ತಡೆಗೆ ಲಸಿಕೆಯೊಂದೇ ಸಹಕಾರಿಯಾಗಿದ್ದು, ಲಸಿಕೆ ಪಡೆದ ಅರ್ಹರು ಸುರಕ್ಷಿತರಾಗಿದ್ದಾರೆ. ಇದರಿಂದ ಆರೋಗ್ಯದಲ್ಲಿ ಯಾವುದೇ ವ್ಯತ್ಯಯ ಸಂಭವಿಸುವುದಿಲ್ಲ ಹಾಗೂ ಅಡ್ಡ ಪರಿಣಾಮಗಳಿಲ್ಲ. ಸಾರ್ವಜನಿಕರು ಯಾವುದೇ ಭಯ ಹಾಗೂ ಆಂತಕವಿಲ್ಲದೆ ಅರ್ಹ ಹೆಣ್ಣು ಮಕ್ಕಳಿಗೆ ಲಸಿಕೆ ಹಾಕಿಸುವಂತೆ ಅವರು ಮನವಿ ಮಾಡಿದ್ದಾರೆ.

<><><>

ಸಿರಿಧಾನ್ಯಗಳಲ್ಲಿ ನಾರಿನಾಂಶ ಹಾಗೂ ಕಬ್ಬಿಣಾಂಶ ಹೆಚ್ಚಿದ್ದು ಪೋಷಕಾಂಶಗಳ ಕಣಜವಾದ, ಪವಾಡ ಧಾನ್ಯಗಳನ್ನು ದೈನಂದಿನ ಆಹಾರದಲ್ಲಿ ಬಳಸುವುದರಿಂದ, ಸುದೃಢ ಆರೋಗ್ಯ ಕಾಯ್ದುಕೊಳ್ಳಬಹುದು ಎಂದು ಉಡುಪಿ ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಉದಯಕುಮಾರ ಶೆಟ್ಟಿ ತಿಳಿಸಿದ್ದಾರೆ. ಮಣಿಪಾಲ್ ರಜತಾದ್ರಿಯ ಜಿಲ್ಲಾಧಿಕಾರಿ ಕಚೇರಿ ಸಂಕೀರ್ಣದ ಅಟಲ್ ಬಿಹಾರಿ ವಾಜಪೇಯಿ ಸಭಾಂಗಣದಲ್ಲಿ ರಾಷ್ಟ್ರೀಯ ಖಾದ್ಯತೈಲ ಅಭಿಯಾನ ಎಣ್ಣೆಕಾಳು ಯೋಜನೆಯಡಿ ಜಿಲ್ಲಾ ಮಟ್ಟದ ಕಾರ್ಯಾಗಾರ ಹಾಗೂ ರಾಷ್ಟ್ರೀಯ ಆಹಾರ ಭದ್ರತೆ ಮತ್ತು ಪೌಷ್ಟಿಕ ಅಭಿಯಾನ ಯೋಜನೆಯಡಿ ಸಿರಿಧಾನ್ಯ ಹಬ್ಬವನ್ನು ಉದ್ಘಾಟಿಸಿ ಅವರು ಮಾತನಾಡಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.

<><><>